146ನೇ ಅಧಿವೇಶನ
ನಿ-72
ಕ್ರ-70
ಕುಂಬಾರ

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಅರುಣ ಶಹಾಪುರ ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ.**

**ವಿಷಯ**

ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು.

**ಉತ್ತರ**

ಸರ್ಕಾರದ ಪತ್ರ ಸಂಖ್ಯೆ:ಇಡಿ/240/ಯುಪಿಸಿ/2014, ದಿನಾಂಕ:01.09.2017 ರಲ್ಲಿ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ, ದಿನಾಂಕ:31.12.2015 ರೊಳಗೆ ನಿವೃತ್ತಿ, ಮರಣ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿ ಇರುವ ಬೋಧಕ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಿಕೊಳ್ಳಲು ಅನುಮತಿ ನೀಡಲಾಗಿದ್ದು, ಅದರಂತೆ ಹುದ್ದೆಗಳನ್ನು ಭರ್ತಿ ಮಾಡಲು ಇಲಾಖಾವತಿಯಿಂದ ಕ್ರಮವಹಿಸಲಾಗುತ್ತಿತ್ತು.

ಆದರೆ, ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ:ಆಇ/157/ವೆಚ್ಚ-8/2020, ದಿನಾಂಕ:10.06.2020 & ಆಇ/3/ಬಿಇಎಂ/2020, ದಿನಾಂಕ:06.07.2020 ರನ್ವಯ "ಕೋವಿಡ್-19ರ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವುದರಿಂದ, ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡುವಂತಿಲ್ಲ, ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಹೊಸದಾಗಿ ಸಹಮತಿ ನೀಡುವಂತಿಲ್ಲ, ಹುದ್ದೆಗಳನ್ನು ವೇತನಾನುದಾನಕ್ಕೆ ಒಳಪಡಿಸುವಂತಿಲ್ಲ, ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್‌ಲಾಗ್ ಹುದ್ದೆಗಳೂ ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ. ಈಗಾಗಲೇ ಆರ್ಥಿಕ ಇಲಾಖೆಯ ಸಹಮತಿ ಪಡೆದು ನೇಮಕಾತಿಯ ವಿವಿಧ ಹಂತಗಳಲ್ಲಿರುವ ಹುದ್ದೆಗಳಿಗೂ ಸಹ ಈ ಆದೇಶ ಅನ್ವಯವಾಗುತ್ತದೆ. ಆದ್ದರಿಂದ ಮುಂದಿನ ಆದೇಶದವರೆಗೆ ಈ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದಂತೆ" ತಿಳಿಸಿದೆ.

ಆದಾಗ್ಯೂ, ಬೋಧಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವುದಕ್ಕೆ ಸಂಬಂಧಿಸಿದಂತೆ ಸರ್ಕಾರ ಹಾಗೂ ಇಲಾಖೆಯ ವಿವಿಧ ಹಂತಗಳಲ್ಲಿ ಬಾಕಿ ಇರುವ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. ಸಹಮತಿ ನಿರೀಕ್ಷಿಸಿದೆ.

ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿನಾಂಕ:31.12.2015 ರೊಳಗೆ ವಿವಿಧ ಕಾರಣಗಳಿಂದ ತೆರವಾಗಿರುವ ಬೋಧಕರ ಹುದ್ದೆಗಳನ್ನು ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಭರ್ತಿ ಮಾಡುವುದಕ್ಕೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆಯ ಮಿತವ್ಯಯ ಆದೇಶ ತೆರವುಗೊಳಿಸಿ ಖಾಲಿ ಹುದ್ದೆ ಭರ್ತಿಗೆ ಅನುಮತಿ ನೀಡಿದ ನಂತರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

....2.

ಅನುದಾನಿತ ಪದವಿ ಕಾಲೇಜುಗಳಲ್ಲಿನ ಬೋಧಕೇತರ ಖಾಲಿ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/551/ಯುಪಿಸಿ/99, ದಿನಾಂಕ:07.08.2003 ರಲ್ಲಿ ಹೊರಡಿಸಿರುವ ಕರ್ನಾಟಕ ಶಿಕ್ಷಣ ಸಂಸ್ಥೆಗಳು, (ಕಾಲೇಜು ಶಿಕ್ಷಣ) ನಿಯಮಗಳು-2003ರ ನಿಯಮ 08(02) ರಲ್ಲಿ "Vacant and unapproved Post of Non-teaching staff as on 01.03.2001 shall be permanently unaided. Any vacancies in the Non-teaching Posts which as arisen after 01.03.2001 on account of retirement, resignation, removal, dismissal and death etc., are to remain permanently unaided. Such Vacancies which are unaided shall be filled by the management and salary and other allowances shall be paid from its own resources ಎಂದು ತಿಳಿಸಲಾಗಿರುತ್ತದೆ. ಆದ್ದರಿಂದ ಬೋಧಕೇತರ ಹುದ್ದೆಗಳ ಭರ್ತಿಗೆ ಅವಕಾಶವಿರುವುದಿಲ್ಲ.

ಇಡಿ 25 ಯುಪಿಸಿ 2022

**(ಡಾ: ಅಶ್ವಥ್ ನಾರಾಯಣ ಸಿ.ಎನ್.)**
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ. ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು